	ನೀಡಲು			

ಇ)

1) ಮೇಲಿನ ಕಾರ್ಯಕ್ರಮಗಳಡಿಯಲ್ಲಿ ಆರ್ಥಿಕ ಇಲಾಖೆಯಿಂದ ಬಿಡುಗಡೆಯಾಗಿರುವಷ್ಟೆ ಹಣವನ್ನು ವೆಚ್ಚ ಮಾಡಲಾಗಿದೆ. ಉಳಿದ ಹಣವನ್ನು ಪರಿಷ್ಕೃತ ಆಯವ್ಯಯದಲ್ಲಿ ಕಡಿತಗೊಳಿಸಲಾಗಿದೆ.

2) ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಗಣಕ ಶಿಕ್ಷಣ ನೀಡಲು ರಾಜ್ಯ ಆಯವ್ಯಯದಲ್ಲಿ ರೂ.25 ಕೋಟಿ ಒದಗಿಸಲಾಗಿತ್ತು. ಆದರೆ, ಕೇಂದ್ರ ಪುರಸ್ಕೃತ ಯೋಜನೆಯಾದ ಐಸಿಟಿ–3ನೇ ಫೇಸ್‌ನಲ್ಲಿ ಅನುದಾನಿತ ಪ್ರೌಢಶಾಲೆಗಳಿಗೂ ಕೇಂದ್ರ ಸರ್ಕಾರದ ಅನುದಾನ ವಿಸ್ತರಿಸಿರುವುದರಿಂದ ನಿಗದಿಯಾದ ಹಣವನ್ನು ವೆಚ್ಚ ಮಾಡಿರುವುದಿಲ್ಲ.

ಗ್ರಂಥಾಲಯಗಳ ನಿರ್ವಹಣೆ

743 (1045) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಬಾಲ್ಕಿ) : ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸ ಗ್ರಂಥಾಲಯಗಳನ್ನು ಸ್ಥಾಪಿಸಲು ಅನುಸರಿಸುವ ಮಾನದಂಡಗಳೇನು; ಎಷ್ಟು ಜನಸಂಖ್ಯೆಗೆ ಒಂದರಂತೆ ಗ್ರಂಥಾಲಯಗಳನ್ನು ಸ್ಥಾಪಿಸಲಾಗುವುದು; ಇದರ ಅನ್ವಯ ಬೀದರ್ ಜಿಲ್ಲೆಯಲ್ಲಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು; ಜಿಲ್ಲೆಯ ಜನಸಂಖ್ಯೆಗೆ ಅನುಗುಣವಾಗಿ ಇನ್ನು ಎಷ್ಟು ಗ್ರಂಥಾಲಯಗಳ ಅವಶ್ಯಕತೆ ಇದೆ;

ಆ) ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಯಾವ ಯಾವ ಸ್ಥಳಗಳಲ್ಲಿ ಹೊಸ ಗ್ರಂಥಾಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆ;

ಇ) ಜಿಲ್ಲೆಯಲ್ಲಿ ಈಗ ಇರುವ ಗ್ರಂಥಾಲಯಗಳ ಪೈಕಿ ಎಷ್ಟು ಗ್ರಂಥಾಲಯಗಳು ಸ್ವಂತ ಕಟ್ಟಡದಲ್ಲಿವೆ ಮತ್ತು ಯಾವ ಯಾವ ಗ್ರಂಥಾಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ;

ಈ) ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಹುತೇಕ ಗ್ರಂಥಾಲಯಗಳ ಕಟ್ಟಡಗಳ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ (ಇಂತಹ ಗ್ರಂಥಾಲಯಗಳ ವಿವರ ಒದಗಿಸುವುದು); ಹಾಗಿದ್ದಲ್ಲಿ, ಈ ಕಟ್ಟಡಗಳನ್ನು ದುರಸ್ಥಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಊ) ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರತಿ ಗ್ರಂಥಾಲಯದ ನಿರ್ವಹಣೆಗಾಗಿ ಕಳೆದ ಮೂರು ವರ್ಷದ ಅವಧಿಯಲ್ಲಿ ಯಾವ ಯಾವ ಬಾಬ್ತಿಗೆ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ?

ಶ್ರೀ ಕೆ. ಶಿವನಗೌಡ ನಾಯಕ್ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು) :

ಅ) ಸಾರ್ವಜನಿಕ ಗ್ರಂಥಾಲಯ ಅಧಿನಿಯಮ 1965ರ ನಿಯಮ–16, 17 ಹಾಗೂ 18ರನ್ವಯ ಹೊಸ ಗ್ರಂಥಾಲಯಗಳನ್ನು ಸ್ಥಾಪಿಸಲಾಗುತ್ತಿದೆ. ಜನಸಂಖ್ಯೆಯನ್ನು ಆಧರಿಸಿ ಗ್ರಂಥಾಲಯಗಳನ್ನು ಪ್ರಾರಂಭಿಸಲಾಗುವುದಿಲ್ಲ ಹಾಗಿದ್ದಾಗ್ಯೂ ಪುರಸಭೆ, ಪಟ್ಟಣ ಪಂಚಾಯಿತಿ, ತಾಲ್ಲೂಕು ಕೇಂದ್ರ ಸ್ಥಾನ, ನಗರ ಸಭೆ, ಮಹಾನಗರ ಪಾಲಿಕೆ ಮತ್ತು ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನಗಳಲ್ಲಿ ಗ್ರಂಥಾಲಯಗಳನ್ನು ಸ್ಥಾಪಿಸಲಾಗುತ್ತಿದೆ. ಅಲ್ಲದೇ, ನಗರ ಸಭೆ ಹಾಗೂ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಾರ್ಡಿಗೊಂದರಂತೆ ಗ್ರಂಥಾಲಯಗಳನ್ನು ಸ್ಥಾಪಿಸಲಾಗುತ್ತಿದೆ. ಬೀದರ್ ಜಿಲ್ಲೆಯಲ್ಲಿ 196 ಗ್ರಂಥಾಲಯಗಳಿವೆ. ಜಿಲ್ಲೆಯ ಜನಸಂಖ್ಯೆಗೆ ಅನುಗುಣವಾಗಿ ಹೊಸ ಗ್ರಂಥಾಲಯಗಳ ಅವಶ್ಯಕತೆ ಇರುವುದಿಲ್ಲ.

ಆ) ಪ್ರಸ್ತಾವನೆ ಇರುವುದಿಲ್ಲ.

ಇ) 03 ಗ್ರಂಥಾಲಯಗಳು ಸ್ವಂತ ಕಟ್ಟಡದಲ್ಲಿವೆ. 1 ಶಾಖಾ ಗ್ರಂಥಾಲಯವು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. ಇನ್ನುಳಿದ 192 ಗ್ರಂಥಾಲಯಗಳು ಗ್ರಾಮ ಪಂಚಾಯತ್ ವ್ಯಾಪ್ತಿಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ.

ಈ) ಗಮನಕ್ಕೆ ಬಂದಿರುವುದಿಲ್ಲ.

ಉ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳ ವೆಚ್ಚದ ವಿವರ ಕೆಳಗಿನಂತಿವೆ: (ರೂಪಾಯಿಗಳಲ್ಲಿ)

	ಸಿಬ್ಬಂದಿ ವೇತನ	ಕಾರು ಬಾಡಿಗೆ	ಶಿಷ್ಯ ವೇತನ	ಅಸುದಾವ	ಇತರೆ	ಗೌರವ ಧನ	ನಿಯತ-ಕಾಲಿಕಗಳು	ಕಟ್ಟಡ ನಿರ್ವಹಣಾ
2006–07	11,81,698	—	—	—	10,000	—	—	3,85,961
2007–08	16,48,067	1,87,872	26,751	7,05,049	4,46,950	—	—	—
2008–09	10,78,866	60,000	16,993	1,394	—	15,500	5,402	—